# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 09 ಹೆಚ್‌ಹೆಚ್‌ಎಲ್ 2024

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ:17.04.2024

## ಅಧಿಸೂಚನೆ

2024ನೇ ಸಾಲಿನ ಲೋಕಸಭೆಗೆ ಸಾರ್ವತ್ರಿಕ ಚುನಾವಣೆ ಘೋಷಣೆಯಾಗಿದ್ದು, ಕರ್ನಾಟಕ ರಾಜ್ಯದ ನೆರೆ ರಾಜ್ಯಗಳಾಗಿರುವ ತಮಿಳುನಾಡು ರಾಜ್ಯದಲ್ಲಿ ದಿನಾಂಕ:19.04.2024ರ ಶುಕ್ರವಾರ ಹಾಗೂ ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯಗಳಲ್ಲಿ ದಿನಾಂಕ:13.05.2024ರ ಸೋಮವಾರದಂದು ಮತದಾನ ಮಾಡಲು ನಿಗಧಿಯಾಗಿದೆ. ಮೇಲೆ ಸೂಚಿಸಿರುವ 03 ರಾಜ್ಯಗಳಲ್ಲಿ ಮತದಾರರಾಗಿರುವವರು ಕರ್ನಾಟಕ ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಾಧ್ಯತೆ ಇರುವುದರಿಂದ ಅಂತಹ ಮತದಾರರಿಗೆ ಮತದಾನದ ದಿನಾಂಕಗಳಂದು ಆಯಾ ಗಡಿ ಜಿಲ್ಲೆಗಳಲ್ಲಿನ ಕೈಗಾರಿಕೆಗಳು, ಕಾರ್ಖಾನೆಗಳು ಹಾಗೂ ಇನ್ನಿತರೆ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮತದಾರರಿಗೆ ಮಾತ್ರ ಸೀಮಿತವಾಗಿ ಮತದಾನ ಮಾಡಲು ಅನುಕೂಲವಾಗುವಂತೆ Representation of People's Act,1951ರ ಸೆಕ್ಷನ್-135ಬಿ ಅಡಿಯಲ್ಲಿ ವೇತನ ಸಹಿತ ರಜೆಯನ್ನು ಘೋಷಿಸಲಾಗಿದೆ. ಈ ಅವಕಾಶವನ್ನು ಉಪಯೋಗಿಸಿಕೊಳ್ಳಲು ವ್ಯಾಪಕವಾಗಿ ಪ್ರಚಾರ ಮಾಡುವಂತೆ ಸೂಚಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ವಿಜಯಕುಮಾರ್ ಹೆಚ್ ಬಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಿಆಸು ಇಲಾಖೆ (ರಾಜ್ಯ ಶಿಷ್ಟಾಚಾರ)

**ಪ್ರತಿಯನ್ನು:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ವಿಧಾನಸೌಧ, ಬೆಂಗಳೂರು
6. ಪೊಲೀಸ್ ಮಹಾನಿರ್ದೇಶಕರು, ಬೆಂಗಳೂರು
7. ರಾಜ್ಯ ಮುಖ್ಯ ಚುನಾವಣಾಧಿಕಾರಿಗಳು, ನಿರ್ವಾಚನ ನಿಲಯ, ಬೆಂಗಳೂರು.
8. ಪ್ರಾದೇಶಿಕ ಆಯುಕ್ತರುಗಳು, ಬೆಂಗಳೂರು / ಕಲಬುರಗಿ / ಮೈಸೂರು / ಬೆಳಗಾವಿ.
9. ಸರ್ಕಾರದ ಕಾರ್ಯದರ್ಶಿಗಳು, ಸಿಆಸು ಇಲಾಖೆ, ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, ವಿಧಾನಸೌಧ, ಬೆಂಗಳೂರು
11. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು
12. ಸಂಬಂಧಪಟ್ಟ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳು
13. ನಿರ್ದೇಶಕರು, ವಾರ್ತಾ ಇಲಾಖೆ, ಬೆಂಗಳೂರು
14. ನಿರ್ದೇಶಕರು, ಆಕಾಶವಾಣಿ ಮತ್ತು ದೂರದರ್ಶನ, ಬೆಂಗಳೂರು
15. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು